691 (480) ಡಾ॥ ಮಹಾದೇವಪ್ಪ ಹೆಚ್.ಸಿ. (ಟಿ.ನರಸೀಪುರ) – ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಪಡಿತರ ಚೀಟಿಯಿಂದ ಗೊಂದಲ ಉಂಟಾಗಿರುವುದು ನಿಜವೇ ;

ಆ) ಪಡಿತರ ಚೀಟಿಯನ್ನು ಬಡತನ ರೇಖೆಗಿಂತ ಕೆಳಗಿರುವ ಜನಾಂಗದವರಿಗೆ ವಿತರಿಸದೆ ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಇ) ಬಂದಿದ್ದಲ್ಲಿ, ಪಡಿತರ ಚೀಟಿ ವಿತರಣೆ ಗೊಂದಲವನ್ನು ಪರಿಹರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ, ಎಷ್ಟು ಕಾಲಮಿತಿಯೊಳಗೆ ಕ್ರಮ ಕೈಗೊಳ್ಳಲಾಗುವುದು ?

ಶ್ರೀ ಗೋವಿಂದ ಎಂ. ಕಾರಜೋಳ (ಆಹಾರ ಮತ್ತು ನಾಗರಿಕ ಸರಬರಾಜು ಸಚಿವರು) :

ಅ) ಹೌದು.

ಆ) ಹೌದು.

ಇ) ಅನರ್ಹರು ಬಿಪಿಎಲ್ ಪಡಿತರ ಚೀಟಿ ಹೊಂದಿದ್ದು ಅರ್ಹರಿಗೆ ಬಿಪಿಎಲ್ ಪಡಿತರ ಚೀಟಿ ನೀಡಿರುವುದಿಲ್ಲವೆಂದು ದೂರುಗಳು ಬಂದ ಹಿನ್ನೆಲೆಯಲ್ಲಿ ಜನವರಿ 2005 ರಂದು ಮನೆ ಮನೆ ಸಮೀಕ್ಷಾ ಕಾರ್ಯವನ್ನು ಕೈಗೊಳ್ಳಲಾಗಿದೆ. ಈ ಸಮೀಕ್ಷೆಯಲ್ಲಿ ಅರ್ಹ ಫಲಾನುಭವಿಗಳನ್ನು ಗುರುತಿಸಿ ಅರ್ಹತೆಗೆ ಅನುಗುಣವಾಗಿ ತಾತ್ಕಾಲಿಕ ಪಡಿತರ ಕೂಪನ್‌ಗಳನ್ನು ವಿತರಿಸಲಾಗಿರುತ್ತದೆ.

ಈ) ತಾತ್ಕಾಲಿಕ ಪಡಿತರ ವಿತರಣೆಯಲ್ಲಿ ಉಂಟಾಗಿರುವ ಲೋಪದೋಷಗಳನ್ನು ಸರಿಪಡಿಸಲು ಅಹವಾಲು ಕೇಂದ್ರಗಳನ್ನು ಪ್ರಾರಂಭಿಸಲಾಗಿದೆ. ಈ ಕೇಂದ್ರಗಳಲ್ಲಿ ಸ್ವೀಕರಿಸಲಾದ ಅಹವಾಲುಗಳ ಪೂರ್ಣ ವಿಲೇವಾರಿಯ ನಂತರ ಅರ್ಹ ಕುಟುಂಬಗಳಿಗೆ ತಾತ್ಕಾಲಿಕ ಪಡಿತರ ಚೀಟಿಗಳ ವಿತರಣೆಗೆ ಕ್ರಮ ಕೈಗೊಳ್ಳಲಾಗುವುದು. ನಂತರ ಖಾಯಂ ಪಡಿತರ ಚೀಟಿಯನ್ನು ನೀಡಲಾಗುವುದು. ಮೇಲ್ಕಂಡ ಎಲ್ಲಾ ಕಾರ್ಯಕ್ರಮಗಳನ್ನು ಪೂರೈಸಲು ಕನಿಷ್ಠ 6 ತಿಂಗಳ ಕಾಲಾವಕಾಶ ಬೇಕಿರುತ್ತದೆ.